# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 788 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 13/03/2025 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸರ್ಕಾರ ಘೋಷಿಸಿದ ಪಂಚ ಗ್ಯಾರಂಟಿಗಳ ಪೈಕಿ ಯುವನಿಧಿ ಯೋಜನೆಯು ಒಂದಾಗಿದ್ದು, ಈ ಜಿಲ್ಲೆಗಳಲ್ಲಿ ಯೋಜನೆ ಘೋಷಿಸಿದ ದಿನಾಂಕದಿಂದ ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳು ಅರ್ಜಿ ಸಲ್ಲಿಸಿದ್ದಾರೆ; (ವಿವರ ನೀಡುವುದು). | ಯುವನಿಧಿ ಯೋಜನೆ ಘೋಷಿಸಿದ ದಿನಾಂಕದಿಂದ ಇಲ್ಲಿಯವರೆಗೆ ಕಲಬುರಗಿ ಜಿಲ್ಲೆಯಲ್ಲಿ 17561 ಅಭ್ಯರ್ಥಿಗಳು ಹಾಗೂ ಯಾದಗಿರಿ ಜಿಲ್ಲೆಯಲ್ಲಿ 7642 ಅಭ್ಯರ್ಥಿಗಳು ನೋಂದಾಯಿಸಿರುತ್ತಾರೆ. |
| ಆ) | ಯುವನಿಧಿಗೆ ಅರ್ಜಿ ಸಲ್ಲಿಸಿದ ಫಲಾನುಭವಿಗಳಲ್ಲಿ ಎಷ್ಟು ಫಲಾನುಭವಿಗಳಿಗೆ ನಿರುದ್ಯೋಗ ಭತ್ಯೆ ದೊರೆತಿದೆ ಹಾಗೂ ಸರ್ಕಾರ ನಿಗದಿಪಡಿಸಿರುವ ಭತ್ಯೆ ಎಷ್ಟು; (ವಿವರ ನೀಡುವುದು) | ಜನವರಿ 2025 ರ ಅಂತ್ಯಕ್ಕೆ ಕಲಬುರಗಿ ಜಿಲ್ಲೆಯ 13102 ಮತ್ತು ಯಾದಗಿರಿ ಜಿಲ್ಲೆಯ 5177 ಫಲಾನುಭವಿಗಳಿಗೆ ನಿರುದ್ಯೋಗ ಭತ್ಯೆ ಪಾವತಿಸಲಾಗಿದೆ. ವಿವರ ಈ ಕೆಳಗಿನಂತಿದೆ. |

| ಜಿಲ್ಲೆ | ಪದವಿ/ ಸ್ನಾತಕೋತ್ತರ ಪದವಿ | ಡಿಪ್ಲೋಮಾ | ಒಟ್ಟು |
|---|---|---|---|
| ಕಲಬುರಗಿ | 12966 | 136 | 13102 |
| ಯಾದಗಿರಿ | 5130 | 47 | 5177 |

| | | |
|---|---|---|
| | | ಈ ಯೋಜನೆಯಡಿ ಪದವೀಧರ / ಸ್ನಾತಕೋತ್ತರ ಪದವೀಧರರಿಗೆ ಮಾಹೆವಾರು ರೂ.3,000/- ಮತ್ತು ಡಿಪ್ಲೋಮಾ ತೇರ್ಗಡೆಯಾದವರಿಗೆ ಮಾಹೆವಾರು ರೂ.1,500/- ನಿರುದ್ಯೋಗ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ (ಡಿಬಿಟಿ) ಪಾವತಿಸಲಾಗುತ್ತಿದೆ. |
| ಇ) | ಯುವನಿಧಿ ದೊರೆಯದೆ ನಿರಾಸೆಯಾಗಿರುವ ಯುವಜನರಿಗೆ ಸರ್ಕಾರ ಕಲ್ಪಿಸಿರುವ ಪರ್ಯಾಯ ಯೋಜನೆಗಳು ಯಾವುವು? | ಯುವನಿಧಿ ದೊರೆಯದೆ ನಿರಾಸೆಯಾಗಿರುವ ಯುವಜನರಿಗೆ ಉದ್ಯೋಗಾವಕಾಶ ಕಲ್ಪಿಸಲು ಉದ್ಯೋಗ ವಿನಿಮಯ ಕಚೇರಿಗಳ ಮೂಲಕ ನೇರ ಸಂದರ್ಶನ ಮತ್ತು ಮಿನಿ ಉದ್ಯೋಗ ಮೇಳಗಳನ್ನು ಆಯೋಜಿಸಲಾಗುತ್ತಿದೆ.<br><br>ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ವತಿಯಿಂದ ರಾಜ್ಯದ ಯುವಕ / ಯುವತಿಯರಿಗೆ ಅಲ್ಪಾವಧಿ ತರಬೇತಿ ಕಾರ್ಯಕ್ರಮಗಳನ್ನು ನೀಡಲಾಗುವುದು ಮತ್ತು ಉದ್ಯೋಗಾವಕಾಶಗಳನ್ನು ಕಲ್ಪಿಸಲಾಗುವುದು. ಉದ್ಯೋಗದಾತರು ಮತ್ತು ಉದ್ಯೋಗಾಕಾಂಕ್ಷಿಗಳನ್ನು ಒಂದೇ ವೇದಿಕೆಯಡಿ ತಂದು ಉದ್ಯೋಗ ಮೇಳಗಳನ್ನು ಆಯೋಜಿಸುವ ಮೂಲಕ ಯುವಕ / ಯುವತಿಯರಿಗೆ ಉದ್ಯೋಗಾವಕಾಶಗಳನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಕೌಉಜೀಇ 49 ಕೈತಪ್ರ 2025

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.